Akashvani: Bangalore
National Bulletin In Kannada
07.06.2025 : 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು :

- ಪಹಲ್ಗಾಮ್ ಭಯೋತ್ಪಾದಕ ದಾಳಿ ಖಂಡಿಸಿದ ಬ್ರಿಕ್ಸ್ ರಾಷ್ಟ್ರಗಳು
- ಈ ತಿಂಗಳ ಅಂತ್ಯದಲ್ಲಿ ನಡೆಯಲಿರುವ ಜಿ-೭ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗಿ
- ಇಂದು ದೇಶಾದ್ಯಂತ ಬಕ್ರೀದ್ ಆಚರಣೆ; ರಾಷ್ಟ್ರಪತಿ ಸೇರಿದಂತೆ ಗಣ್ಯರಿಂದ ಶುಭಾಶಯ
- ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿದ ಸ್ಪಿನ್ ಬೌಲರ್ ಪಿಯುಶ್ ಚಾವ್ಲಾ

************

ಹತ್ತು ಬ್ರಿಕ್ಸ್ ರಾಷ್ಟ್ರಗಳ ಸಂಸತ್ತುಗಳು ಪಹಲ್ಗಾಮ್ ಭಯೋತ್ಪಾದಕರ ದಾಳಿಯನ್ನು ತೀವ್ರವಾಗಿ ಖಂಡಿಸಿವೆ ಮತ್ತು ಭಯೋತ್ಪಾದನೆಯ ವಿರುದ್ಧ ಶೂನ್ಯ ಸಹಿಷ್ಣುತೆಯ ಭಾರತದ ನೀತಿಗೆ ಸಹಮತ ವ್ಯಕ್ತಪಡಿಸಿವೆ. ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರು ಈ ತಿಂಗಳ ೪ ಮತ್ತು ೫ ರಂದು ಬ್ರೆಜಿಲ್‌ನ ಬ್ರೆಸಿಲಿಯಾದಲ್ಲಿ ನಡೆದ ೧೧ನೇ ಬ್ರಿಕ್ಸ್ ಸಂಸದೀಯ ವೇದಿಕೆಗೆ ಭಾರತೀಯ ನಿಯೋಗದ ನೇತೃತ್ವ ವಹಿಸಿದ್ದರು. ಕೃತಕ ಬುದ್ಧಿಮತ್ತೆಯ ಜವಾಬ್ದಾರಿಯುತ ಬಳಕೆ, ಜಾಗತಿಕ ವ್ಯಾಪಾರ ಮತ್ತು ಆರ್ಥಿಕತೆ, ಅಂತರ್-ಸಂಸದೀಯ ಸಹಕಾರ, ಜಾಗತಿಕ ಶಾಂತಿ ಮತ್ತು ಭದ್ರತೆಯಂತಹ ಪ್ರಮುಖ ಜಾಗತಿಕ ವಿಷಯಗಳ ಕುರಿತು ಒಮ್ಮತ ವ್ಯಕ್ತವಾಯಿತು. ಹಲವಾರು ಸುತ್ತಿನ ಚರ್ಚೆಗಳ ನಂತರ ವಿವಿಧ ವಿಷಯಗಳ ಕುರಿತು ಭಾರತದ ನಿಲುವನ್ನು ವ್ಯಾಪಕವಾಗಿ ಪ್ರಶಂಸಿಸಲಾಗಿದೆ ಮತ್ತು ಅಂತಿಮ ಜಂಟಿ ಘೋಷಣೆಯಲ್ಲಿ ಸರ್ವಾನುಮತದಿಂದ ಇದನ್ನು ಅಂಗೀಕರಿಸಲಾಗಿದೆ ಎಂದು ಲೋಕಸಭೆ ಸಚಿವಾಲಯ ತಿಳಿಸಿದೆ. ಭಯೋತ್ಪಾದನೆಯನ್ನು ಎದುರಿಸುವಲ್ಲಿ ಭಾರತದ ದೃಢವಾದ ನೀತಿಯನ್ನು ಅಂಗೀಕರಿಸಲಾಯಿತು.

ಭಾರತವು ಎಲ್ಲಾ ರೀತಿಯ ಭಯೋತ್ಪಾದಕ ದಾಳಿಗಳನ್ನು ಖಂಡಿಸಿತು ಮತ್ತು ಭಯೋತ್ಪಾದನೆಯ ಬಗ್ಗೆ ಶೂನ್ಯ ಸಹಿಷ್ಣುತೆಯ ನೀತಿಯನ್ನು ಅಳವಡಿಸಿಕೊಳ್ಳಲು ದೃಢವಾಗಿ ಪ್ರತಿಪಾದಿಸಿತು. ಹತ್ತು ಬ್ರಿಕ್ಸ್ ದೇಶಗಳಾದ ಭಾರತ, ಬ್ರೆಜಿಲ್, ರಷ್ಯಾ, ಚೀನಾ, ದಕ್ಷಿಣ ಆಫ್ರಿಕಾ, ಇರಾನ್, ಯುಎಇ, ಈಜಿಪ್ಟ್, ಇಥಿಯೋಪಿಯಾ ಮತ್ತು ಇಂಡೋನೇಷ್ಯಾ ಸಂಸತ್ತುಗಳ ನಿಯೋಗಗಳು ಸಮ್ಮೇಳನದಲ್ಲಿ ಸಕ್ರಿಯವಾಗಿ ಭಾಗವಹಿಸಿ, ಜಂಟಿ ಘೋಷಣೆಯನ್ನು ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದವು.

************

ಬಿಜೆಪಿ ಸಂಸದ ರವಿಶಂಕರ್ ಪ್ರಸಾದ್ ನೇತೃತ್ವದ ಸರ್ವಪಕ್ಷ ನಿಯೋಗವು ನಿನ್ನೆ ಜರ್ಮನಿಯ ವಿದೇಶಾಂಗ ಸಚಿವ ಜೋಹಾನ್ ವಾಡೆಫುಲ್ ಅವರನ್ನು ಭೇಟಿ ಮಾಡಿತು. ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ಜೋಹಾನ್ ವಾಡೆಫುಲ್ ಖಂಡಿಸಿದರು ಮತ್ತು ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಭಾರತದೊಂದಿಗೆ ಜರ್ಮನಿಯ ಬಲವಾದ ಬೆಂಬಲ ಮತ್ತು ಒಗ್ಗಟ್ಟನ್ನು ಪುನರುಚ್ಚರಿಸಿದರು. ಬಳಿಕ ಬರ್ಲಿನ್‌ನಲ್ಲಿ ಜರ್ಮನ್ ಸಂಸತ್ತಿನ ಉಪಾಧ್ಯಕ್ಷ ಓಮಿದ್ ನೂರಿಪೋರ್ ಅವರೊಂದಿಗೆ ನಿಯೋಗ ಸಂವಾದ ನಡೆಸಿತು. ಭಯೋತ್ಪಾದನೆಯ ವಿರುದ್ಧ ಭಾರತದ ತತ್ವಬದ್ಧ ನಿಲುವಿಗೆ ಜರ್ಮನಿಯ ಬಲವಾದ ಮತ್ತು ದೃಢವಾದ ಬೆಂಬಲವನ್ನು ನಿಯೋಗ ಶ್ಲಾಘಿಸಿತು. ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಭಾರತದ ಪ್ರತಿಕ್ರಿಯೆ ಮತ್ತು ಆಪರೇಷನ್ ಸಿಂದೂರ್ ಬಗ್ಗೆ ನಿಯೋಗ ವಿವರಿಸಿತು.

ಸರ್ವಪಕ್ಷ ನಿಯೋಗವು, ಜರ್ಮನ್ ಬುಂಡೆಸ್ಟ್ಯಾಗ್ ಸದಸ್ಯ ರಾಲ್ಫ್ ಬ್ರಿಂಕ್‌ಹೌಸ್ ಮತ್ತು ವಿದೇಶಾಂಗ ವ್ಯವಹಾರಗಳ ಸಮಿತಿಯ ಅಧ್ಯಕ್ಷ ಅರ್ಮಿನ್ ಲಾಚೆಟ್ ಅವರನ್ನು ಸಹ ಭೇಟಿಯಾಯಿತು. ಜರ್ಮನಿ ಮತ್ತು ಭಾರತವು ವಿಶೇಷವಾಗಿ ಜಾಗತಿಕ ಭದ್ರತೆಯ ವಿಷಯದಲ್ಲಿ ವಿಶ್ವಾಸಾರ್ಹ ಪಾಲುದಾರಿಕೆಯನ್ನು ಹಂಚಿಕೊಂಡಿವೆ. ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಭಾರತದೊಂದಿಗೆ ಜರ್ಮನಿ ನಿಂತಿದೆ. ಕದನ ವಿರಾಮ ಕಾಯ್ದುಕೊಳ್ಳುವುದು ಮತ್ತು ಮಾತುಕತೆ ಮುಂದುವರಿಯುವುದು ಅತ್ಯಗತ್ಯ ಎಂದು ಲಾಚೆಟ್ ಅರ್ಮಿನ್ ಹೇಳಿದರು.

************

ಈ ತಿಂಗಳ ಅಂತ್ಯದಲ್ಲಿ ಕೆನಡಾದ ಕನನಾಸ್ಕಿಸ್‌ನಲ್ಲಿ ನಡೆಯಲಿರುವ ಜಿ೭ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ. ಈ ಸಂಬಂಧ ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ ಅವರು ನಿನ್ನೆ ಪ್ರಧಾನಿ ಮೋದಿ ಅವರಿಗೆ ದೂರವಾಣಿ ಕರೆ ಮಾಡಿದ್ದರು. ಇತ್ತೀಚೆಗೆ ನಡೆದ ಚುನಾವಣೆಯಲ್ಲಿ ವಿಜೇತರಾದ ಕಾರ್ನಿ ಅವರನ್ನು ಪ್ರಧಾನಿ ಮೋದಿ ಅಭಿನಂದಿಸಿದರು ಮತ್ತು ಕನನಾಸ್ಕಿಸ್‌ನಲ್ಲಿ ನಡೆಯಲಿರುವ ಜಿ೭ ಶೃಂಗಸಭೆಗೆ ಆಹ್ವಾನ ನೀಡಿದ್ದಕ್ಕಾಗಿ ಅವರಿಗೆ ಧನ್ಯವಾದ ಸಲ್ಲಿಸಿದರು. ಶೃಂಗಸಭೆಯಲ್ಲಿ ಕೆನಡಾದ ಪ್ರಧಾನಿಯನ್ನು ಭೇಟಿಯಾಗಲು ಎದುರು ನೋಡುತ್ತಿದ್ದೇನೆ ಎಂದು ಇದೇ ವೇಳೆ ಪ್ರಧಾನಿ ಮೋದಿ ಹೇಳಿದರು. ಈ ತಿಂಗಳ ೧೫ ರಿಂದ ೧೭ ರವರೆಗೆ ಕೆನಡಾದ ಆಲ್ಬರ್ಟಾ ಪ್ರಾಂತ್ಯದ ಕನನಾಸ್ಕಿಸ್‌ನಲ್ಲಿ ಗ್ರೂಪ್ ಆಫ್ ಸೆವೆನ್-ಜಿ೭ ಶೃಂಗಸಭೆ ನಡೆಯಲಿದೆ. ಈ ಕುರಿತು ಒಟ್ಟಾವಾದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ, ಜಿ೭ ಶೃಂಗಸಭೆಯು ಉದಯೋನ್ಮುಖ ಮತ್ತು ಅಭಿವೃದ್ಧಿಶೀಲ ರಾಷ್ಟ್ರಗಳೊಂದಿಗೆ ಪಾಲುದಾರಿಕೆಯನ್ನು ರೂಪಿಸುವತ್ತ ಗಮನಹರಿಸುತ್ತದೆ ಎಂದು ಹೇಳಿದರು. ಭಾರತವು ವಿಶ್ವದ ಅತಿದೊಡ್ಡ ಆರ್ಥಿಕತೆಗಳಲ್ಲಿ ಒಂದಾಗಿದ್ದು, ಜಾಗತಿಕ ಪೂರೈಕೆ ಸರಪಳಿಗಳಲ್ಲಿ ಪ್ರಮುಖ ಪಾತ್ರ ವಹಿಸುತ್ತಿರುವುದರಿಂದ ಭಾರತವು ಈ ವೇದಿಕೆಯಲ್ಲಿರಬೇಕು ಎಂದು ಅವರು ಪ್ರತಿಪಾದಿಸಿದರು.

************

ಮಧ್ಯ ಏಷ್ಯಾದ ದೇಶಗಳೊಂದಿಗಿನ ಸಂಬಂಧಗಳು ಭಾರತಕ್ಕೆ ಯಾವಾಗಲೂ ಪ್ರಮುಖ ಆದ್ಯತೆಯಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಕಝಾಕಿಸ್ತಾನ್, ಕಿರ್ಗಿಜ್ ಗಣರಾಜ್ಯ, ತಜಿಕಿಸ್ತಾನ್, ತುರ್ಕಮೆನಿಸ್ತಾನ್ ಮತ್ತು ಉಜ್ಬೇಕಿಸ್ತಾನ್ ವಿದೇಶಾಂಗ ಸಚಿವರು ನವದೆಹಲಿಯಲ್ಲಿ ನಿನ್ನೆ ಪ್ರಧಾನಿ ಅವರನ್ನು ಭೇಟಿಯಾದರು. ಭಾರತ-ಮಧ್ಯ ಏಷ್ಯಾ ಸಂವಾದದ ನಾಲ್ಕನೇ ಸಭೆಯಲ್ಲಿ ನಡೆದ ಸಕಾರಾತ್ಮಕ ಮತ್ತು ಉತ್ಪಾದಕ ಚರ್ಚೆಗಳ ಕುರಿತು ಸಚಿವರು ಪ್ರಧಾನಿಯವರಿಗೆ ವಿವರಿಸಿದರು. ಹೆಚ್ಚಿನ ಆರ್ಥಿಕ ಅಂತರ್‌ಸಂಪರ್ಕ, ವಿಸ್ತೃತ ಸಂಪರ್ಕ, ವರ್ಧಿತ ರಕ್ಷಣಾ ಮತ್ತು ಭದ್ರತಾ ಸಹಕಾರ ಹಾಗೂ ಉದಯೋನ್ಮುಖ ಕ್ಷೇತ್ರಗಳಲ್ಲಿ ಸಮಗ್ರ ಸಹಯೋಗಕ್ಕಾಗಿ ಪ್ರಧಾನಿ ಮೋದಿ ತಮ್ಮ ದೃಷ್ಟಿಕೋನವನ್ನು ಹಂಚಿಕೊಂಡರು.

ಪ್ರಾದೇಶಿಕ ಮತ್ತು ಜಾಗತಿಕ ಸವಾಲುಗಳನ್ನು ಎದುರಿಸುವಲ್ಲಿ ಬಲವಾದ ಭಾರತ-ಮಧ್ಯ ಏಷ್ಯಾ ಪಾಲುದಾರಿಕೆಯು ಶಕ್ತಿಯುತವಾಗಿ ಕಾರ್ಯನಿರ್ವಹಿಸುತ್ತದೆ ಎಂದು ಅವರು ಹೇಳಿದರು. ಮಧ್ಯ ಏಷ್ಯಾದ ವಿದೇಶಾಂಗ ಸಚಿವರು ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಬಲವಾಗಿ ಖಂಡಿಸಿದರು ಮತ್ತು ಗಡಿಯಾಚೆಗಿನ ಭಯೋತ್ಪಾದನೆಯ ವಿರುದ್ಧ ಭಾರತದ ಹೋರಾಟಕ್ಕೆ ತಮ್ಮ ಬೆಂಬಲವನ್ನು ವ್ಯಕ್ತಪಡಿಸಿದರು.

************

ಇಂದು ಬಕ್ರೀದ್ ಹಬ್ಬ. ದೇಶಾದ್ಯಂತ ಬಕ್ರೀದ್ ಹಬ್ಬವನ್ನು ಮುಸ್ಲಿಂ ಸಮುದಾಯದವರು ಶ್ರದ್ಧಾ ಭಕ್ತಿಯಿಂದ ಆಚರಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ದೇಶದ ಸಮಸ್ತ ಜನತೆಗೆ ಮತ್ತು ವಿದೇಶದಲ್ಲಿರುವ ಭಾರತೀಯ ಮುಸ್ಲಿಂ ಸಮುದಾಯಕ್ಕೆ ಶುಭ ಕೋರಿದ್ದಾರೆ. ಈ ಹಬ್ಬ ತ್ಯಾಗ, ನಂಬಿಕೆ ಮತ್ತು ಮಾನವೀಯ ಮೌಲ್ಯಗಳ ಸಂಕೇತವೆಂದು ರಾಷ್ಟ್ರಪತಿಯವರು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ. ನಿಸ್ವಾರ್ಥತೆ ಮತ್ತು ಸಮರ್ಪಣೆಯ ಮೌಲ್ಯಗಳನ್ನು ಅಳವಡಿಸಿಕೊಳ್ಳುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕಾಗಿ ಎಲ್ಲರೂ ಒಗ್ಗೂಡಿ ಕೆಲಸ ಮಾಡಬೇಕೆಂದು ಅವರು ಮನವಿ ಮಾಡಿದ್ದಾರೆ. ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ಜನತೆಗೆ ಬಕ್ರೀದ್ ಹಬ್ಬದ ಶುಭಾಶಯ ಕೋರಿದ್ದಾರೆ. ಈ ಪವಿತ್ರ ಹಬ್ಬವು ನಾಗರಿಕರ ಜೀವನದಲ್ಲಿ ಸಂತೋಷ, ಸಮೃದ್ಧಿ ಮತ್ತು ಸಕಾರಾತ್ಮಕ ಪರಿಣಾಮ ಬೀರುವ ಅವಕಾಶಗಳನ್ನು ಕರುಣಿಸಲಿ ಎಂದು ಹಾರೈಸಿದ್ದಾರೆ.

************

ಕಳೆದ ಒಂದು ದಶಕದಲ್ಲಿ ಭಾರತ ಸರ್ವತೋಮುಖವಾಗಿ ಗಮನಾರ್ಹ ಬದಲಾವಣೆಯನ್ನು ಕಂಡಿದ್ದು, ಸೇವೆ, ಸುಶಾಸನ ಮತ್ತು ಗರೀಬ್ ಕಲ್ಯಾಣ್ ತತ್ವದಡಿ ಮುನ್ನಡೆಯುತ್ತಿದೆ. ಕೇಂದ್ರ ಸರ್ಕಾರ ಕಳೆದ ೧೧ ವರ್ಷಗಳಲ್ಲಿ ಕೈಗೊಂಡಿರುವ ಹಲವು ಪ್ರಮುಖ ಪ್ರಯತ್ನಗಳ ಕುರಿತು ಆಕಾಶವಾಣಿ ಸುದ್ದಿ ವಿಭಾಗ ವಿಶೇಷ ವರದಿಯನ್ನು ಪ್ರಸಾರ ಮಾಡುತ್ತಿದೆ. ಈ ಮಾಲಿಕೆಯಲ್ಲಿ ಇಂದು, ಪರಿಸರ ಸಂರಕ್ಷಣೆ ಮತ್ತು ನದಿಗಳ ಪುನರುಜ್ಜೀವನಗೊಳಿಸಿ ಸಂರಕ್ಷಿಸುವ ಕುರಿತ ಒಂದು ವರದಿ ಇಲ್ಲಿದೆ.

ಧ್ವನಿ: ವಿಶೇಷ ವರದಿ

ಕಳೆದ ದಶಕದಲ್ಲಿ, ಭಾರತವು ಪರಿಸರ ಸಂರಕ್ಷಣೆಯನ್ನು ಸಮಗ್ರ ಬೆಳವಣಿಗೆಯೊಂದಿಗೆ ಸಂಯೋಜಿಸುವ ಅಭಿವೃದ್ಧಿ ಮಾದರಿಯನ್ನು ಅಳವಡಿಸಿಕೊಂಡಿದೆ. ನದಿಗಳ ಪುನರುಜ್ಜೀವನದಿಂದ ಹಿಡಿದು, ಪರಿಸರ ವ್ಯವಸ್ಥೆಗಳ ಪುನಃಸ್ಥಾಪನೆ ಮತ್ತು ಹಸಿರು ಮೂಲಸೌಕರ್ಯವನ್ನು ರಚಿಸುವವರೆಗೆ, ದೇಶವು ಸಹಾನುಭೂತಿಯೊಂದಿಗೆ ಸಂರಕ್ಷಣೆಗೆ ಬಲವಾದ ಬದ್ಧತೆಯನ್ನು ಪ್ರದರ್ಶಿಸಿದೆ. ನಮಾಮಿ ಗಂಗೆ ಯೋಜನೆ-ವಿಶ್ವದ ಅತಿದೊಡ್ಡ ನದಿ ಪುನರುಜ್ಜೀವನ ಕಾರ್ಯಕ್ರಮಗಳಲ್ಲಿ ಒಂದಾಗಿದೆ. ಇದು ನೀರಿನ ಗುಣಮಟ್ಟವನ್ನು ಸುಧಾರಿಸಿದೆ, ಜೀವವೈವಿಧ್ಯತೆಯನ್ನು ಹೆಚ್ಚಿಸಿದೆ ಮತ್ತು ಗಂಗಾ ನದಿಯ ಪುನರುಜ್ಜೀವನದಲ್ಲಿ ಸ್ಥಳೀಯ ಭಾಗವಹಿಸುವಿಕೆಯನ್ನು ಉತ್ತೇಜಿಸಿದೆ. ಇದರ ಜೊತೆಗೆ, ಸ್ವಚ್ಛ ಭಾರತ ಮಿಷನ್ ಮತ್ತು ಗೋಬರ್ಧನ್ ಯೋಜನೆಯು ನೈರ್ಮಲ್ಯ ಮತ್ತು ತ್ಯಾಜ್ಯ ನಿರ್ವಹಣೆಯನ್ನು, ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಪರಿವರ್ತಿಸಿದೆ. ಗೋಬರ್ಧನ್ ಯೋಜನೆಯು ಸಾವಯವ ತ್ಯಾಜ್ಯವನ್ನು ಜೈವಿಕ ಅನಿಲ ಮತ್ತು ಗೊಬ್ಬರವಾಗಿ ಪರಿವರ್ತಿಸುವುದನ್ನು ಉತ್ತೇಜಿಸುತ್ತದೆ. ಸ್ವಚ್ಛತೆ ಮತ್ತು ಇಂಧನ ಸ್ವಾವಲಂಬನೆ ಎರಡನ್ನೂ ಬೆಂಬಲಿಸುತ್ತದೆ. 'ಏಕ್ ಪೆಡ್ ಮಾ ಕೆ ನಾಮ್'ನಂತಹ ಅಭಿಯಾನಗಳು, ನಾಗರಿಕರನ್ನು ಪರಿಸರ ಕ್ರಿಯೆಗಾಗಿ ಸಜ್ಜುಗೊಳಿಸಿವೆ. ದೇಶಾದ್ಯಂತ ೧೪೨ ಕೋಟಿಗೂ ಹೆಚ್ಚು ಮರಗಳನ್ನು ನೆಡಲಾಗಿದೆ. ಇದು ಇಂಗಾಲದ ಹೀರಿಕೊಳ್ಳುವಿಕೆ ಮತ್ತು ಪರಿಸರ ಪುನಃಸ್ಥಾಪನೆಗೆ ಕೊಡುಗೆ ನೀಡಿದೆ.

************

ವಕ್ಫ್‌ಗೆ ಸಂಬಂಧಿಸಿದ ವಿವಿಧ ವ್ಯವಹಾರಗಳನ್ನು ನಡೆಸುವ ಕೇಂದ್ರ ಸರ್ಕಾರದ UMEED ಪೋರ್ಟಲ್‌ಗೆ ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ದೆಹಲಿಯಲ್ಲಿ ನಿನ್ನೆ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಹೊಸ ವಕ್ಫ್ ಆಸ್ತಿಗಳ ನೋಂದಣಿ, ವಕ್ಫ್ ವಿವರ ಸಲ್ಲಿಕೆ, ವಕ್ಫ್ ಖಾತೆಗಳನ್ನು ನಿರ್ವಹಿಸುವಿಕೆ ಸೇರಿದಂತೆ ವಿವಿಧ ಉದ್ದೇಶಗಳನ್ನು ಪೂರೈಸಲು ಈ ಪೋರ್ಟಲ್ ಆರಂಭಿಸಲಾಗಿದೆ.

ವಕ್ಫ್ ಆಸ್ತಿ ನಿರ್ವಹಣೆ ಮತ್ತು ಆಡಳಿತದಲ್ಲಿ ಪಾರದರ್ಶಕತೆ ತರುವ ಉದ್ದೇಶವನ್ನು ಕೇಂದ್ರ ಸರ್ಕಾರ ಹೊಂದಿದೆ ಎಂದು ಹೇಳಿದರು.

***ಧ್ವನಿ*** ಕಿರಣ್ ರಿಜಿಜು

************

ಭಾರತೀಯ ಕ್ರಿಕೆಟ್ ತಾರೆ ಸ್ಪಿನ್ ಬೌಲರ್ ಪಿಯುಶ್ ಚಾವ್ಲಾ ತಮ್ಮ ವೃತ್ತಿ ಜೀವನಕ್ಕೆ ನಿವೃತ್ತಿ ಘೋಷಿಸಿದ್ದಾರೆ. ೨೦ ವರ್ಷಗಳ ವೃತ್ತಿ ಜೀವನದ ನಂತರ ಎಲ್ಲಾ ಅಂತಾರಾಷ್ಟ್ರೀಯ ಮತ್ತು ರಾಷ್ಟ್ರೀಯ ಕ್ರಿಕೆಟ್ ಪಂದ್ಯಗಳಿಂದ ನಿವೃತ್ತಿ ಹೊಂದುತ್ತಿರುವುದಾಗಿ ಚಾವ್ಲಾ ಸಾಮಾಜಿಕ ಮಾಧ್ಯಮದಲ್ಲಿ ಪ್ರಕಟಿಸಿದ್ದಾರೆ. ಇದಕ್ಕೂ ಮೊದಲು, ಚಾವ್ಲಾ ೨೦೦೭ರ ಐಸಿಸಿ ಟಿ-೨೦ ವಿಶ್ವಕಪ್ ಮತ್ತು ನಂತರ ೨೦೧೧ರ ಐಸಿಸಿ ಕ್ರಿಕೆಟ್ ವಿಶ್ವಕಪ್‌ನಲ್ಲಿ ವಿಜೇತ ಭಾರತೀಯ ತಂಡದ ಭಾಗವಾಗಿದ್ದರು.

************